**ಪ್ರಥಮ ದರ್ಜೆ ನ್ಯಾಯಿಕ ದಂಡಾಧಿಕಾರಿಗಳ ನ್ಯಾಯಾಲಯ, ಬಾಗೇಪಲ್ಲಿ.**

**ಸಿ.ಸಿ. ಸಂಖ್ಯೆ:793/2022**

| | |
|---|---|
| ಫ್ರಾಸಾ | 3 |
| ಚಾಸಾ | 3 |

**ಸಾಕ್ಷಿಯನ್ನು ಕರೆಯಿಸಿ ಸತ್ಯ ಭೋದನೆ ಮಾಡಿ ಪ್ರಮಾಣೀಕರಿಸಿದ ದಿನಾಂಕ** 13.02.2026.

| | | |
|---|---|---|
| ಸಾಕ್ಷಿಯ ಹೆಸರು | : | ಬೀಬಿಜಾನ್ |
| ಗಂಡನ ಹೆಸರು | : | ಮಕ್ತುನ್ ಸಾಬ್ |
| ವಯಸ್ಸು | : | 65 ವರ್ಷ |
| ಉದ್ಯೋಗ | : | ಕೂಲಿ ಕೆಲಸ |
| ವಾಸಸ್ಥಳ | : | ಬುರಗಮಡಗು |

**ಮುಖ್ಯ ವಿಚಾರಣೆ : ಸ.ಸ.ಅ. ರವರಿಂದಃ**

ಆರೋಪಿತರು ಯಾವುದೇ ರೀತಿ ಅಕ್ರಮ ಗುಂಪು ಕಟ್ಟಿಕೊಂಡು ಬಂದು ನನಗೆ, ಚಾಸಾ-1 ಮತ್ತು 2 ರವರಿಗೆ ಹಲ್ಲೆ ಮಾಡಿಲ್ಲ, ಪ್ರಾಣ ಬೆದರಿಕೆ ಹಾಕಿಲ್ಲ, ಅವಾಚ್ಯ ಶಬ್ದಗಳಿಂದ ನಿಂದಿಸಿಲ್ಲ ಎಂದು ನುಡಿಯುತ್ತಾರೆ. ಅಲ್ಲದೆ ಪೊಲೀಸರಿಗೆ ಹೇಳಿಕೆ ನೀಡಿಲ್ಲ ಎಂದು ನುಡಿಯುತ್ತಾರೆ.

**(ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿಯನ್ನಾಗಿ ಪರಿಗಣಿಸಿ ಪಾಟೀ ಸವಾಲು ಮಾಡಲು ಸ.ಸ.ಅ. ರವರು ಅನುಮತಿಯನ್ನು ಕೋರಿದ್ದು ನೀಡಲಾಯಿತು).**

**ಪಾಟೀ ಸವಾಲುಃ ಸ.ಸ.ಅ. ರವರಿಂದಃ**

ದಿನಾಂಕ 18.03.2022 ರಂದು ರಾತ್ರಿ 7.30 ಗಂಟೆ ಸಮಯದಲ್ಲಿ ನಾನು ಮತ್ತು ಚಾಸಾ-1 ಮತ್ತು 2 ರವರು ಮನೆಯ ಬಳಿ ಇದ್ದಾಗ, ಆರೋಪಿತರು ಏಕಾಏಕಿ ನನ್ನ ಮನೆಯ ಬಳಿ ಬಂದು ನೀಯಮ್ಮನಾ ದೆಂಗಾ ಎಂದು ಅವಾಚ್ಯ ಶಬ್ದಗಳಿಂದ ಬೈದು, ಈಗ ತೋರಿಸಿದ ದೊಣ್ಣೆಯಿಂದ 1 ನೇ ಆರೋಪಿಯು ಚಾಸಾ-1 ರವರ ಬಲ ಭುಜಕ್ಕೆ ಮತ್ತು ಕುತ್ತಿಗೆಗೆ ಹೊಡೆದು ಊತ ಗಾಯ ಮಾಡಿದರು ಎಂದರೆ ಸರಿಯಲ್ಲ. ಆದೇ ದೊಣ್ಣೆಯಿಂದ 2 ನೇ ಆರೋಪಿಯು ಚಾಸಾ-1 ರವರ ಬಲ ಕಾಲಿನ ಭಾಗಕ್ಕೆ ಹೊಡೆದು ಮೂಳೆ ಮೂರಿತ ಮಾಡಿದರು ಎಂದರೆ ಸರಿಯಲ್ಲ.

ಜಗಳ ಬಿಡಿಸಲು ಬಂದ ನನಗೆ 1 ನೇ ಆರೋಪಿಯು ಈಗ ತೋರಿಸಿದ ಕಲ್ಲಿನಿಂದ ಅವರ ತಲೆಯ ಎಡ ಭಾಗಕ್ಕೆ ಮತ್ತು ಎಡ ಕೈನ ತೋರು ಬೆರಳಿಗೆ ಹೊಡೆದರು ಎಂದರೆ ಸರಿಯಲ್ಲ. 2 ನೇ ಆರೋಪಿಯು ದೊಣ್ಣೆಯಿಂದ ಜಗಳ ಬಿಡಿಸಲು ಬಂದ ನನ್ನ ಬಲ ಕಾಲಿನ ತೊಡೆಗೆ ಹೊಡೆದರು ಎಂದರೆ ಸರಿಯಲ್ಲ. ಅಲ್ಲದೆ ಪ್ರಾಣ ಬೆದರಿಕೆ ಹಾಕಿದರು ಎಂದರೆ ಸರಿಯಲ್ಲ. ನಂತರ ಚಾಸಾ-1 ರವರು ನಿಪಿ-1 ರಂತೆ ಆರೋಪಿತರ ವಿರುದ್ಧ ದೂರು ನೀಡಿದ್ದೆ ಎಂದರೆ ಸರಿಯಲ್ಲ. ನಾನು ಈ ಬಗ್ಗೆ ಪೊಲೀಸರಿಗೆ ಹೇಳಿಕೆ ನೀಡಿಲ್ಲ ಎಂದು ನುಡಿಯುತ್ತಾರೆ.

ಸಾಕ್ಷಿಗೆ ಅಪರಾಧಿಕ ಪ್ರಕ್ರಿಯೆ ಸಂಹಿತೆ ಕಲಂ **161(3)** ರಂತೆ ಪೊಲೀಸರ ಮುಂದೆ ನೀಡಿದ ಹೇಳಿಕೆಯ ಭಾಗವನ್ನು ಈ ಕೆಳಕಂಡಂತೆ ಓದಿ ಹೇಳಲಾಗಿ, ಸಾಕ್ಷಿಯು ಅದನ್ನು ನಿರಾಕರಿಸಿದರು. ಸದರಿ ಹೇಳಿಕೆಯ ಭಾಗವನ್ನು **ನಿಪಿ-4** ಎಂದು ಗುರುತಿಸಲಾಯಿತು. "ನಾನು ಮೇಲ್ಕಂಡ ವಿಳಾಸದಲ್ಲಿ ....................................................... ಈ ನನ್ನ ಮರುಹೇಳಿಕೆಯನ್ನು ನೀಡಿರುತ್ತೇನೆ".

ನಾನು ಆರೋಪಿಗಳೊಂದಿಗೆ ರಾಜಿ ಮಾಡಿಕೊಂಡು ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

**ಪಾಟೀ ಸವಾಲು : ಶ್ರೀ ಎ.ಎಂ.ಎನ್. ವಕೀಲರಿಂದ, ಆರೋಪಿ ತರ ಪರವಾಗಿಃ**

ಪಾಟೀ ಸವಾಲು ಇಲ್ಲವೆಂದು ತಿಳಿಸಿರುತ್ತಾರೆ.

**(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತ ಲೇಖನದಂತೆ ಬೆರಳಚ್ಚು ಮಾಡಿಸಲಾಯಿತು)**

ಓ ಹೇ ಕೇ ಸ ಇದೆ

ಸಿವಿಲ್ ನ್ಯಾಯಾಧೀಶರು ಮತ್ತು
ಜೆ.ಎಂ.ಎಫ್.ಸಿ., ಬಾಗೇಪಲ್ಲಿ.